# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ

**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003**

ಸಂಖ್ಯೆ:ಎಕ್ಸ್1/ಡ್ರಾ.ಗ್ರೇ.ಪ/ಪ.ಕಾ.ನಿ/05/2023-24 ದಿನಾಂಕ:13/12/2023ರ

**ಸುತ್ತೋಲೆ**

**ವಿಷಯ:** ನವೆಂಬರ್ 2023ರ ಮಾಹೆಯಲ್ಲಿ ನಡೆದ ಡ್ರಾಯಿಂಗ್ ಗ್ರೇಡ್ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಕುರಿತು.

*******

ನವೆಂಬರ್ 2023ರ ಮಾಹೆಯಲ್ಲಿ ನಡೆದ ಡ್ರಾಯಿಂಗ್ ಗ್ರೇಡ್ ಪರೀಕ್ಷೆಯ ಫಲಿತಾಂಶವನ್ನು ಮಂಡಲಿಯ ವೆಬ್‌ಸೈಟ್ https://kseab.karnataka.gov.in ನಲ್ಲಿ **ದಿನಾಂಕ:15/12/2023 ರಂದು ಅಪರಾಹ್ನ 3:00 ಗಂಟೆಗೆ ಪ್ರಕಟಿಸಲಾಗುವುದು ಹಾಗೂ** ಸದರಿ ಫಲಿತಾಂಶವನ್ನು **ಪರೀಕ್ಷಾ ಕೇಂದ್ರದ ಲಾಗಿನ್‌ನಲ್ಲಿ ದಿನಾಂಕ:15/12/2023 ರಂದು ಲಭ್ಯಮಾಡಲಾಗುವುದು.** ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಫಲಿತಾಂಶ ಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಂಡು ತಮ್ಮ ಪರೀಕ್ಷಾ ಕೇಂದ್ರದ ಸೂಚನಾ ಫಲಕದಲ್ಲಿ ಪ್ರಕಟಿಸುವುದು. **ಫಲಿತಾಂಶದಲ್ಲಿ ತಿದ್ದುಪಡಿ ಇದ್ದಲ್ಲಿ ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗಾಗಿ ಪರೀಕ್ಷಾ ಕೇಂದ್ರದ ಮೂಲಕ ಪ್ರಸ್ತಾವನೆ ಸಲ್ಲಿಸುವುದು. ಪ್ರಸ್ತಾವನೆಯನ್ನು ಪರಿಶೀಲಿಸಿ ನಿಯಮಾನುಸಾರ ಫಲಿತಾಂಶವನ್ನು ತಿದ್ದುಪಡಿ ಮಾಡಲು ಕ್ರಮವಹಿಸಲಾಗುವುದು.**

ಪರೀಕ್ಷೆಯಲ್ಲಿ ದುರಾಚರಣೆ, ವಂಚನೆ, ಅನುಚಿತ ವರ್ತನೆ, ನಕಲು ಮಾಡಿರುವುದು ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಲಿ ಹೊಂದಿರುತ್ತದೆ.

ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಾಗಿ ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.

| ವಿವರ | ದಿನಾಂಕ |
|---|---|
| ನವೆಂಬರ್ 2023ರ ಮಾಹೆಯಲ್ಲಿ ನಡೆದ ಡ್ರಾಯಿಂಗ್ ಗ್ರೇಡ್ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | **15/12/2023** |
| ನವೆಂಬರ್ 2023ರ ಮಾಹೆಯಲ್ಲಿ ನಡೆದ ಡ್ರಾಯಿಂಗ್ ಗ್ರೇಡ್ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | **21/12/2023** |
| ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳುವ ದಿನಾಂಕ | **22/12/2023** |
| ನವೆಂಬರ್ 2023ರ ಮಾಹೆಯಲ್ಲಿ ನಡೆದ ಡ್ರಾಯಿಂಗ್ ಗ್ರೇಡ್ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | **22/12/2023** |
| ನವೆಂಬರ್ 2023ರ ಮಾಹೆಯಲ್ಲಿ ನಡೆದ ಡ್ರಾಯಿಂಗ್ ಗ್ರೇಡ್ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | **28/12/2023** |

**ಉತ್ತರ ಪತ್ರಿಕೆಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ** ವಿಷಯದ ಉತ್ತರ ಪತ್ರಿಕೆಯ ಸ್ಕ್ಯಾನ್ ಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರುಎಣಿಕೆ ಅಥವಾ

ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವಂತಿಲ್ಲ. ಸ್ಕ್ಯಾನ್ ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಅಪೇಕ್ಷಿಸಿದಲ್ಲಿ ಮರುಎಣಿಕೆ/ ಮರುಮೌಲ್ಯಮಾಪನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

**ಸ್ಕ್ಯಾನ್‌ಪ್ರತಿಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಸಂಬಂಧ ಫ್ಲೋಚಾರ್ಟ್:**

https://kseab.karnataka.gov.in → Click on ONLINE SERVICES → Click on Other exams → Click on Photocopy, Retotaling, Revaluation → Click on Online Application for particular Exam → Click on Application form for Scanned Copy → Enter Exam Registration Number → View → Select Subjects for Scanned Copy → Enter Mobile Number → Enter e-mail ID → Enter Student Postal Address → SUBMIT → Challan Number will be displayed (Note down Challan number for future reference) → Click on Make payment → Select Online Payment → Select Online payment Banks (BILL DESK) → SUBMIT → pay Fee through Online → Print Acknowledgement

**ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು ಮಂಡಲಿಯ ಜಾಲತಾಣ ವಿಳಾಸ https://kseab.karnataka.gov.in ಇಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿರುವುದರಿಂದ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಪಡೆಯಲು ಅಭ್ಯರ್ಥಿಗಳು ತಮ್ಮ ನೋಂದಣಿ ವಿವರಗಳನ್ನು ಹಾಗೂ ಸ್ಕ್ಯಾನ್‌ಪ್ರತಿ ಪಡೆಯುವ ವಿಷಯಗಳ ಮಾಹಿತಿಯನ್ನು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಬೇಕಾಗಿರುತ್ತದೆ. ಸ್ಕ್ಯಾನ್‌ಪ್ರತಿ ಪಡೆಯಲು ಬಯಸುವ ಅಭ್ಯರ್ಥಿಗಳು ಒಂದು ಉತ್ತರ ಪತ್ರಿಕೆಗೆ ಶುಲ್ಕ ರೂ. 500/- ಗಳನ್ನು ಆನ್‌ಲೈನ್‌ನಲ್ಲಿಯೇ ಪಾವತಿಸಬೇಕಾಗಿರುತ್ತದೆ. ಸ್ಕ್ಯಾನ್‌ಪ್ರತಿ ಅಪ್‌ಲೋಡ್ ಮಾಡಿರುವ ಬಗ್ಗೆ ಮಂಡಲಿಯ ಜಾಲತಾಣದಲ್ಲಿ 'Click here to know status for Scanned copy' ಆಯ್ಕೆ ಮಾಡಿ ಪರಿಶೀಲಿಸಿಕೊಳ್ಳಬಹುದಾಗಿದೆ. ಹೀಗೆ ಅಪ್‌ಲೋಡ್ ಆದ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಆನ್‌ಲೈನ್‌ನಲ್ಲಿ ಅಭ್ಯರ್ಥಿಗಳು ಮೇಲ್ಕಾಣಿಸಿದ ಜಾಲತಾಣದಿಂದ ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿ, ಅಪೇಕ್ಷಿಸಿದಲ್ಲಿ ಅಂಕಗಳ ಮರುಎಣಿಕೆ/ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

**ಉತ್ತರ ಪತ್ರಿಕೆಗಳ ಮರುಎಣಿಕೆಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಮರುಎಣಿಕೆಗಾಗಿ ಅರ್ಜಿಸಲ್ಲಿಸಬಹುದಾಗಿದೆ. ಅಂಕಗಳ ಮರುಎಣಿಕೆಗಾಗಿ ಒಂದು ಉತ್ತರ ಪತ್ರಿಕೆಗೆ ಶುಲ್ಕ ರೂ. 150/- ಗಳನ್ನು ಆನ್‌ಲೈನ್ ಮೂಲಕ ಪಾವತಿಸಬೇಕಾಗುತ್ತದೆ.

**ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಪಡೆದ ನಂತರ ಅಭ್ಯರ್ಥಿಗಳು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅಪೇಕ್ಷಿಸಿದಲ್ಲಿ, ಆನ್‌ಲೈನ್ ಮೂಲಕ ಒಂದು ವಿಷಯಕ್ಕೆ ಶುಲ್ಕ ರೂ. 800/- ಗಳನ್ನು ಪಾವತಿಸಬೇಕಿರುತ್ತದೆ. ಮರುಮೌಲ್ಯಮಾಪನದ ನಂತರ 10 ಅಥವಾ 10ಕ್ಕಿಂತ ಹೆಚ್ಚು ಅಂಕಗಳ ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ಹಿಂದಿರುಗಿಸಲಾಗುವುದು.

ಮರುಎಣಿಕೆ ಅಥವಾ ಮರುಮೌಲ್ಯಮಾಪನದ ಫಲಿತಾಂಶವನ್ನು ಪ್ರಕಟಿಸಿದ ನಂತರ ಮಂಡಲಿಯ ಜಾಲತಾಣದಲ್ಲಿ ಪರಿಷ್ಕೃತ ಫಲಿತಾಂಶವನ್ನು ಪರಿಶೀಲಿಸಿಕೊಳ್ಳಬಹುದಾಗಿದೆ.

## ಆನ್‌ಲೈನ್ ಮೂಲಕ ಶುಲ್ಕ ಪಾವತಿಸುವ ಬಗ್ಗೆ:

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ/ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ ನಿಗಧಿತ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನಿಗದಿತ ಶುಲ್ಕವನ್ನು ಆನ್‌ಲೈನ್‌ನಲ್ಲಿ DEBIT CARD/CREDIT CARD/NET BANKING ಮೂಲಕ ಶುಲ್ಕ ಪಾವತಿಸಬಹುದಾಗಿದೆ. ಶುಲ್ಕ ಪಾವತಿಸಿದ ಬ್ಯಾಂಕ್ ಸಂದಾಯದ ರಶೀದಿಯ Transaction Status ನಲ್ಲಿ Transaction successful ಆಗಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು.

| ಶುಲ್ಕ ವಿವರ | |
|---|---|
| ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ | ರೂ. 500/– (ಐದು ನೂರು ರೂಪಾಯಿಗಳು) |
| ಮರುಮೌಲ್ಯಮಾಪನಕ್ಕೆ ಒಂದು ವಿಷಯಕ್ಕೆ ಶುಲ್ಕ | ರೂ. 800/– (ಎಂಟು ನೂರು ರೂಪಾಯಿಗಳು) |
| ಉತ್ತರ ಪತ್ರಿಕೆಗಳ ಮರುಎಣಿಕೆ ಒಂದು ವಿಷಯಕ್ಕೆ ಶುಲ್ಕ | ರೂ. 150/– (ನೂರ ಐವತ್ತು ರೂಪಾಯಿಗಳು) |

## ಫಲಿತಾಂಶಕ್ಕೆ ಸಂಬಂಧಿಸಿದಂತೆ ಸಂಸ್ಥೆಯ ಮುಖ್ಯಸ್ಥರಿಗೆ ಸೂಚನೆಗಳು

**ನವೆಂಬರ್ 2023ರ ಮಾಹೆಯಲ್ಲಿ ನಡೆದ ಡ್ರಾಯಿಂಗ್ ಗ್ರೇಡ್ ಪರೀಕ್ಷೆಯ ಫಲಿತಾಂಶ ಪಟ್ಟಿಯನ್ನು ಮಂಡಲಿಯ ಜಾಲತಾಣದಲ್ಲಿ ಪರೀಕ್ಷಾ ಕೇಂದ್ರದ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ಕೆಳಕಂಡ ಅಂಶಗಳ ಆಧಾರದ ಮೇಲೆ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶವನ್ನು ಕಡ್ಡಾಯವಾಗಿ ಆಯಾ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಪರಿಶೀಲಿಸಲು ತಿಳಿಸಿದೆ. ಹಾಗೂ ಯಾವುದೇ ಕಾರಣಕ್ಕೂ ಮಂಡಲಿಯಿಂದ ಫಲಿತಾಂಶ ಪಟ್ಟಿಯನ್ನು ಭೌತಿಕವಾಗಿ ಪರೀಕ್ಷಾ ಕೇಂದ್ರಗಳಿಗೆ ಕಳುಹಿಸಲಾಗುವುದಿಲ್ಲ.**

- ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಿಂದ ಪರೀಕ್ಷಾ ಮಂಡಲಿಗೆ ಪತ್ರ ವ್ಯವಹರಿಸುವ ಪ್ರತಿಯೊಂದು ಪತ್ರದ ಮುಖ ಪುಟದಲ್ಲಿ ತಮ್ಮ ಪರೀಕ್ಷಾ ಕೇಂದ್ರಕ್ಕೆ ನೀಡಿರುವ ಸಂಕೇತ ಸಂಖ್ಯೆ ದೂರವಾಣಿ ಸಂಖ್ಯೆ ಮತ್ತು E-Mail ವಿಳಾಸವನ್ನು ತಪ್ಪದೇ ನಮೂದಿಸುವುದು.
- ನವೆಂಬರ್ 2023ರ ಮಾಹೆಯಲ್ಲಿ ಪರೀಕ್ಷೆ ಬರೆದ ಎಲ್ಲಾ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗಿರುವ ಬಗ್ಗೆ ಪರಿಶೀಲಿಸಿಕೊಳ್ಳುವುದು.
- ಒಂದು ವೇಳೆ ಯಾವುದಾದರೂ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಲಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.
- ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದೃಢೀಕೃತ ದಾಖಲೆಗಳೊಂದಿಗೆ **(ಕಡ್ಡಾಯವಾಗಿ ಎಸ್.ಎ.ಟಿ.ಎಸ್ ಅಥವಾ ಎಸ್.ಎಸ್.ಎಲ್.ಸಿ ಅಂಕಪಟ್ಟಿಯ ದೃಢೀಕೃತ ನಕಲು ಪ್ರತಿ) ರೂ. 200/–** ದಂಡ ಶುಲ್ಕವನ್ನು ದಿನಾಂಕ:16/12/2023 ರಿಂದ ದಿನಾಂಕ:30/12/2023ರ ಒಳಗೆ ಇತರೆ ಪರೀಕ್ಷೆಗಳ Neft Challan ಮೂಲಕ ಪಾವತಿಸಿ ಮಂಡಲಿಗೆ ಮೂಲ ಪ್ರತಿಯೊಂದಿಗೆ ಸಲ್ಲಿಸತಕ್ಕದ್ದು.
- ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ಅಭ್ಯರ್ಥಿಗೆ ಮಂಡಲಿಯಿಂದ ನೀಡುವ ಅಂಕಪಟ್ಟಿಯು ಆಯಾ ಅಭ್ಯರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

15/12/23

[ಗೋಪಾಲಕೃಷ್ಣ ಹೆಚ್.ಎನ್]
ನಿರ್ದೇಶಕರು (ಪರೀಕ್ಷೆಗಳು)

<u>ಇವರಿಗೆ:</u>

1. ರಾಜ್ಯದ ಎಲ್ಲಾ ಡ್ರಾಯಿಂಗ್ ಗ್ರೇಡ್ ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಗೆ ಸೂಕ್ತ ಕ್ರಮಕ್ಕಾಗಿ,
2. ರಾಜ್ಯದ ಎಲ್ಲಾ ಡಯಟ್ ಪ್ರಾಂಶುಪಾಲರುಗಳಿಗೆ ಸುತ್ತೋಲೆಯನ್ನು ಕಳುಹಿಸುತ್ತಾ ತಮ್ಮ ವ್ಯಾಪ್ತಿಯ ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಗೆ ಸಂಸ್ಥೆಯ ಲಾಗಿನ್‌ನಲ್ಲಿ ಫಲಿತಾಂಶ ಪಟ್ಟಿ ಸಕಾಲದಲ್ಲಿ ಪಡೆದು ಪ್ರಕಟಿಸುವಂತೆ ಕ್ರಮವಹಿಸಲು ಸೂಚಿಸುವುದು.
3. ಶಾಖಾಧಿಕಾರಿಗಳು ಕಂಪ್ಯೂಟರ್ ಶಾಖೆರವರಿಗೆ ಮಂಡಲಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮಕ್ಕಾಗಿ.
4. ಕಛೇರಿ ಪ್ರತಿ.